ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1514
ಸದಸ್ಯರ ಹೆಸರು : ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 24-09-2021.
ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಗ್ರಾಮೀಣಾಭಿವೃದ್ಧಿಗೆಂದು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಯಾವ ಯಾವ ಯೋಜನೆಗಳನ್ನು ರೂಪಿಸಿವೆ; ಈ ಯೋಜನೆಗಳಿಗೆ ಸರ್ಕಾರ ಮೀಸಲಿಟ್ಟಿರುವ ಅನುದಾನವೆಷ್ಟು; ಇದರಲ್ಲಿ ಎಷ್ಟು ಮೊತ್ತವನ್ನು ಖರ್ಚು ಮಾಡಲಾಗಿದೆ; | 2020-21 ನೇ ಸಾಲಿನಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅನುಷ್ಠಾನಗೊಳಿಸಲಾದ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಪ್ರಮುಖ ಯೋಜನೆಗಳಡಿ ಬಿಡುಗಡೆ ಮಾಡಿದ ಅನುದಾನ ಹಾಗೂ ವೆಚ್ಚದ ವಿವರವನ್ನು ಅನುಬಂಧದಲ್ಲಿ ನೀಡಿದೆ. |
| (ಆ) | ರಾಜ್ಯದಲ್ಲಿ ಇದುವರೆಗೂ ಎಷ್ಟು ಪಂಚಾಯತಿಗಳನ್ನು ಮೇಲ್ದರ್ಜೆಗೇರಿಸಲಾಗಿದೆ: ಉಳಿದ ಪಂಚಾಯತಿಗಳನ್ನು ಯಾವ ಕಾಲಮಿತಿಯಲ್ಲಿ ಮೇಲ್ದರ್ಜೆಗೇರಿಸಲಾಗುವುದು; | 2011 ರ ಜನಗಣತಿಯನುಸಾರ, 73 ಗ್ರಾಮ ಪಂಚಾಯತಿಗಳನ್ನು ಪಟ್ಟಣ ಪಂಚಾಯತಿಗಳನ್ನಾಗಿ, 24 ಗ್ರಾಮ ಪಂಚಾಯತಿಗಳನ್ನು ಪುರಸಭೆಗಳನ್ನಾಗಿ ಹಾಗೂ 02 ಗ್ರಾಮ ಪಂಚಾಯತಿಗಳನ್ನು ನಗರಸಭೆಗಳನ್ನಾಗಿ ಪರಿವರ್ತಿಸಲಾಗಿದೆ.<br><br>ಪ್ರಸ್ತುತ ಗ್ರಾಮ ಪಂಚಾಯತಿಯನ್ನು ಪರಿವರ್ತಿಸುವ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |
| (ಇ) | ಪಂಚಾಯತ್ ಇಲಾಖೆಯಲ್ಲಿ ಖಾಲಿ ಇರುವ ಪಿ.ಡಿ.ಓ. ಮತ್ತು ಇ.ಓ.ಗಳ ಸಂಖ್ಯೆ ಎಷ್ಟು; ಇದರಿಂದ ಸಾರ್ವಜನಿಕರಿಗೆ ಆಡಳಿತಾತ್ಮಕವಾಗಿ ಆಗುವ ತೊಂದರೆಗಳನ್ನು ನಿವಾರಿಸಲು ಸರ್ಕಾರ ಯಾವ ಯಾವ ಕ್ರಮ ಕೈಗೊಂಡಿದೆ? | ಗ್ರಾಮ ಪಂಚಾಯತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದಲ್ಲಿ 728 ಹುದ್ದೆಗಳು ಮತ್ತು ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ವೃಂದದಲ್ಲಿ 73 ಹುದ್ದೆಗಳು ಖಾಲಿ ಇರುತ್ತವೆ.<br><br>ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ನೇಮಕಾತಿ ಪ್ರಾಧಿಕಾರ ಆಗಿದ್ದು ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದ ಅರ್ಹ ನೌಕರರು ಲಭ್ಯವಾದಂತೆ ಜೇಷ್ಠತೆ ಮತ್ತು ಅರ್ಹತೆ ಆಧಾರದ ಮೇಲೆ ಮುಂಬಡ್ತಿ ಮೂಲಕ ಭರ್ತಿ ಮಾಡಲು ನಿರ್ದೇಶನ ನೀಡಲಾಗಿದೆ.<br><br>ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಖಾಲಿ ಹುದ್ದೆಗಳು ನೇರ ನೇಮಕಾತಿ ಕೋಟಾದಡಿಯಲ್ಲಿನ ಹುದ್ದೆಗಳಾಗಿದ್ದು, ಸದರಿ ಹುದ್ದೆಗಳಿಗೆ ಪ್ರಸ್ತುತ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮತ್ತು ಇತರೆ ಅಭಿವೃದ್ಧಿ ಇಲಾಖೆಗಳ ಅಧಿಕಾರಿಗಳನ್ನು ನಿಯೋಜನೆ / ಪ್ರಭಾರದಲ್ಲಿರಿಸಲಾಗಿದೆ. |

ಸಂ. ಗ್ರಾಅಪ 368 ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.
ಗ್ರಾಮೀಣಾಭಿವೃದ್ಧಿ ಮತ್ತು

ವಿಧಾನ ಪರಿಷತ್ತಿನ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:1514

ಅನುಬಂಧ

2021-22ನೇ ಸಾಲಿನಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅನುಷ್ಠಾನಿಸಲಾದ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಪ್ರಮುಖ ಯೋಜನೆಗಳಡಿ ಬಿಡುಗಡೆ ಮಾಡಿದ ಅನುದಾನ ಹಾಗೂ ವೆಚ್ಚದ ವಿವರ (ಆಗಸ್ಟ್ -2021 ರ ಅಂತ್ಯದವರೆಗೆ)

(ರೂ. ಲಕ್ಷಗಳಲ್ಲಿ)

| ಕ್ರ. ಸಂ. | ಯೋಜನೆ | ಆಯವ್ಯಯ | ವೆಚ್ಚ |
|---|---|---|---|
| | I. ಕೇಂದ್ರ ವಲಯ / ಕೇಂದ್ರ ಪುರಸ್ಕೃತ | | |
| 1 | ಕೇಂದ್ರ ಹಣಕಾಸು ಆಯೋಗದ ಅನುದಾನ (15ನೇ ಹಣಕಾಸು ಯೋಜನೆ) | 237700.00 | 47540.00 |
| 2 | ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ | 663741.00 | 342687.76 |
| 3 | ಗ್ರಾಮೀಣ ನೀರು ಸರಬರಾಜು (ಎನ್.ಆರ್.ಡಿ.ಡಬ್ಲ್ಯೂ.ಪಿ) | 39056.09 | 98112.89 |
| | II. ರಾಜ್ಯ ವಲಯ | | |
| 4 | ಪಿ.ಎಂ.ಜಿ.ಎಸ್.ವೈ | 150000.00 | 27136.04 |
| 5 | ಪಿ.ಎಂ.ಜಿ.ಎಸ್.ವೈ ರಸ್ತೆಗಳ ನಿರ್ವಹಣೆ | 8000.00 | 1968.65 |
| 6 | ನಮ್ಮ ಗ್ರಾಮ ನಮ್ಮ ರಸ್ತೆ (ಎಸ್, ಡಿ.ಪಿ, ಎಸ್.ಸಿ.ಪಿ-ಟಿ.ಎಸ್.ಪಿ ಒಳಗೊಂಡಂತೆ) | 92000.00 | 11249.16 |
| 7 | ಜಿಲ್ಲಾ ಪಂಚಾಯತಿ ಅಭಿವೃದ್ಧಿ ಅನುದಾನ | 17207.24 | 4301.75 |
| 8 | 2702 - ಸಣ್ಣ ನೀರಾವರಿ ಕೆರೆಗಳ ವಾರ್ಷಿಕ ನಿರ್ವಹಣೆ ಮತ್ತು ಪುನಶ್ಚೇತನ ಯೋಜನೆ | 1603.77 | 9.00 |
| 9 | 3054 - ಯೋಜನೇತರ (ನಿರ್ವಹಣಾ ಅನುದಾನ) ಗ್ರಾಮೀಣ ರಸ್ತೆ ನಿರ್ವಹಣೆ ಯೋಜನೆ (ಕಾರ್ಯಪಡೆ) | 21873.00 | 148.59 |
| 10 | 3054-80-196-1-03-300 (ಲಮ್ ಸಮ್) ಯೋಜನೆ | 20000.00 | 3276.45 |